**ಕರ್ನಾಟಕ ಸರ್ಕಾರ**

ಸಂಖ್ಯೆ : 287 : ಬಿಎಂಎಂ : 2000

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ : 5-9-2001

**ಸುತ್ತೋಲೆ**

ವಿಷಯ :- ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ''ಕನ್ನಡ ಅನುಷ್ಠಾನ ವಿಭಾಗ'' ವನ್ನು ತೆರೆಯುವ ಬಗ್ಗೆ.

ಉಲ್ಲೇಖ: 1) ಅಧ್ಯಕ್ಷರು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅವರ ಪತ್ರ ಸಂ. ಅಸಪ.ಕ.ಅಪೂ.ಕಾ. 11/99

ದಿನಾಂಕ 13-6-2000

2) ಸರ್ಕಾರದ ಪತ್ರದ ಸಮ ಸಂಖ್ಯೆ ದಿ. 18-7-2000.

-------

ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು, ಅವರ ದಿನಾಂಕ 13-6-2000ರ ಪತ್ರದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 1994 ಪರಿಚ್ಛೇದ 16ರನ್ವಯ ಕನ್ನಡ ಅನುಷ್ಠಾನದ ಜವಾಬ್ದಾರಿಯನ್ನು ವಿಭಾಗಮಟ್ಟದಲ್ಲಿ ವಿಭಾಗಾಧಿಕಾರಿಗಳಿಗೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳಿಗೆ ಉಪ ವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳಿಗೆ ಹಾಗು ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ತಹಸೀಲ್ದಾರರಿಗೆ ವಹಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕನ್ನಡ ಅನುಷ್ಠಾನದ ಕಾರ್ಯ ನಿರ್ವಹಣೆಯನ್ನು

ಹೆಚ್ಚು ಪರಿಣಾಮಕಾರಿಯಾಗಿ ಮತ್ತು ಸೂಕ್ತ ಸಮಯದಲ್ಲಿ ಜರುಗಿಸಲು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ''ಕನ್ನಡ ಅನುಷ್ಠಾನ ವಿಭಾಗ'' ತೆರೆಯಲು ಸೂಕ್ತ ಆದೇಶ ಹೊರಡಿಸಲು ಉಲ್ಲೇಖ (1)ರ ಪತ್ರದಲ್ಲಿ ಸೂಚಿಸಿರುತ್ತಾರೆ. ಅದರಂತೆ ಉಲ್ಲೇಖ (2)ರ ಸರ್ಕಾರದ ದಿನಾಂಕ 18-7-2000ರ ಪತ್ರದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಸೂಚಿಸಿರುವಂತೆ ಕ್ರಮ ತೆಗೆದುಕೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಎಲ್ಲಾ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಕನ್ನಡ ಅನುಷ್ಠಾನ ವಿಭಾಗವನ್ನು ತೆರೆಯುವಂತೆ ಸೂಚಿಸಿ ಒಂದು ವರ್ಷಕ್ಕೂ ಹೆಚ್ಚಿನ ಕಾಲಾವಧಿ ಕಳೆದಿದೆ. ಈ ಬಗ್ಗೆ ನೆನಪೋಲೆಯನ್ನೂ ಸಹಾ ಬರೆಯಲಾಗಿದೆ. ಅದರಲ್ಲಿ ಕೆಲವು ಜಿಲ್ಲಾಧಿಕಾರಿಗಳಿಂದ ಮಾತ್ರ ಕನ್ನಡ ಅನುಷ್ಠಾನ ವಿಭಾಗ ತೆರೆದ ಬಗ್ಗೆ ಮಾಹಿತಿ ಬಂದಿದ್ದು ಬಹುತೇಕ ಜಿಲ್ಲಾಧಿಕಾರಿಗಳಿಂದ ಮಾಹಿತಿ ಬಂದಿಲ್ಲವಾದ್ದರಿಂದ ಈ ಬಗ್ಗೆ ಮಾನ್ಯ ಅಧ್ಯಕ್ಷರು ವಿಷಾದ ವ್ಯಕ್ತಪಡಿಸುತ್ತಾರೆ.

ಆದ್ದರಿಂದ, ಮೇಲ್ಕಂಡಂತೆ ಕೂಡಲೇ ಜಿಲ್ಲಾಧಿಕಾರಿಗಳ ಕಛೇರಿಗಳಲ್ಲಿ ''ಕನ್ನಡ ಅನುಷ್ಠಾನ ವಿಭಾಗ'' ತೆರೆಯಲು ಸೂಕ್ತ ಆದೇಶ ಹೊರಡಿಸಿ ಸದರಿ ಆದೇಶದ ಪ್ರತಿಯನ್ನು ಸರ್ಕಾರಕ್ಕೆ ಕಳುಹಿಸಿಕೊಡುವಂತೆ ಸೂಚಿಸಿದೆ.

ಈ ವಿಭಾಗದ ಕೆಲಸವನ್ನು ಹಾಲೀ ಇರುವ ಸಿಬ್ಬಂದಿಯಿಂದಲೇ ನಿರ್ವಹಿಸಲು ಸಹಾ ತಿಳಿಸಿದೆ.

ಸಹಿ/-

**(ಡಿ.ಬಿ. ಗಣಾಚಾರಿ)**

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ, (ಸೇವೆಗಳು)

ಇವರಿಗೆ,

1) ಎಲ್ಲಾ ವಿಭಾಗಾಧಿಕಾರಿಗಳಿಗೆ,
2) ಎಲ್ಲಾ ಜಿಲ್ಲಾಧಿಕಾರಿಗಳಿಗೆ,
3) ಎಲ್ಲಾ ಉಪ ವಿಭಾಗಾಧಿಕಾರಿಗಳಿಗೆ (ಜಿಲ್ಲಾಧಿಕಾರಿಗಳ ಮುಖಾಂತರ)
4) ಎಲ್ಲಾ ತಹಸೀಲ್ದಾರರಿಗೆ (ಜಿಲ್ಲಾಧಿಕಾರಿಗಳ ಮುಖಾಂತರ)
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.